**Bangalore**
**Regional News**
**30.12.2025 / 2.30 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಬೆಂಗಳೂರಿನ ಹೆಚ್‌ಎಎಲ್‌ನಲ್ಲಿಂದು ಧೃವ್ ನಾಗರಿಕ ಹೆಲಿಕಾಪ್ಟರ್ ಹಾರಾಟಕ್ಕೆ ಚಾಲನೆ ನೀಡಿದ ಕೇಂದ್ರ ಸಚಿವ ರಾಮ್ ಮೋಹನ್ ನಾಯ್ಡು
2. ಕೋಗಿಲಿನಲ್ಲಿ ಅಕ್ರಮ ಭೂ-ಒತ್ತುವರಿ ಮಾಡಿದವರ ವಿರುದ್ಧ ಕಾನೂನು ಕ್ರಮ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟನೆ
3. ಅತಿಕ್ರಮಣದಾರರಿಗೆ ಪರಿಹಾರ ಘೋಷಣೆ ; ಸರ್ಕಾರದ ವಿರುದ್ಧ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅಸಮಾಧಾನ
4. ಸರ್ಕಾರಕ್ಕೆ ಕರ್ನಾಟಕ ಆಡಳಿತ ಸುಧಾರಣ ಆಯೋಗದ ೧೦ನೇ ವರದಿ ಸಲ್ಲಿಸಿದ ಮಾಜಿ ಸಚಿವ ಆರ್.ವಿ. ದೇಶಪಾಂಡೆ
5. ಇಂದು ವೈಕುಂಠ ಏಕಾದಶಿ ; ರಾಜ್ಯದ ವಿಷ್ಣು ದೇಗುಲಗಳಲ್ಲಿ ವಿಶೇಷ ಪೂಜೆ

<><><><>

ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು, ಬೆಂಗಳೂರಿನಲ್ಲಿಂದು ಹೆಚ್.ಎ.ಎಲ್. ಹೆಲಿಕಾಪ್ಟರ್ ವಿಭಾಗದಲ್ಲಿ ಧೃವ್ ಎನ್‌ಜಿ ನಾಗರಿಕ ಹೆಲಿಕಾಪ್ಟರ್ ಪ್ರಥಮ ಹಾರಾಟಕ್ಕೆ ಚಾಲನೆ ನೀಡಿದರು. ಈ ಹೆಲಿಕಾಪ್ಟರ್‌ನ ಸ್ವದೇಶಿ ಇಂಜಿನ್ ಶಕ್ತಿಗೆ ಇಂದು ನಾಗರಿಕ ವಿಮಾನಯಾನದ ಪ್ರಧಾನ ವ್ಯವಸ್ಥಾಪಕರಿಂದ ಪ್ರಮಾಣ ಪತ್ರ ನೀಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು, ಹೆಚ್‌ಎಎಲ್ ನಾಗರಿಕ ವಿಮಾನಯಾನ ಉತ್ಪಾದನಾ ವಲಯಕ್ಕೆ ಕಾಲಿಡುತ್ತಿರುವುದು ಒಂದು ಐತಿಹಾಸಿಕ ಕ್ಷಣ ಎಂದು ಬಣ್ಣಿಸಿದ್ದಾರೆ. ಧೃವ್ ಹೆಲಿಕಾಪ್ಟರ್‌ನ ನಾಗರಿಕ ರೂಪಾಂತರವು ನಾಗರಿಕರಿಗೆ ದೇಶೀಯ ಹೆಲಿಕಾಪ್ಟರ್ ಹಾರಾಟದ ಅವಕಾಶ ಕಲ್ಪಿಸಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ : ರಾಮ್ ಮೋಹನ್ ನಾಯ್ಡು

<><><><>

ಅಕ್ರಮವಾಗಿ ಯಾರು ಭೂ-ಒತ್ತುವರಿ ಮಾಡಬಾರದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚನೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೋಗಿಲು ಪ್ರಕರಣ ಕುರಿತಂತೆ ಪ್ರತಿಕ್ರಿಯಿಸಿ ಓಲೈಕೆ ರಾಜಕಾರಣ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಒತ್ತುವರಿಗೆ ಕಾರಣರಾದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಮತದಾರರ ಪಟ್ಟಿಯಲ್ಲಿ ಹೆಸರು ಹಾಗೂ ಸ್ಥಳೀಯ ವಿಳಾಸ ಇದ್ದರೆ ಹಾಗೂ ಅರ್ಹರಿಗೆ ಮಾತ್ರ ಮನೆ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಬೆಂಗಳೂರಿನ ಕೋಗಿಲು ಕ್ರಾಸ್ ಬಳಿ ಅತಿಕ್ರಮಣದಾರರಿಗೆ ಪರಿಹಾರ ನೀಡುವುದಕ್ಕೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ನವದೆಹಲಿಯಲ್ಲಿ ಮಾತನಾಡಿದ ಅವರು, ಇದು ಕಾಂಗ್ರೆಸ್ ಸರ್ಕಾರದ ಧರ್ಮ ಆಧಾರಿತ ರಾಜಕೀಯ ಎಂದು ಆರೋಪಿಸಿದ್ದಾರೆ. ರಾಜ್ಯ ಸರ್ಕಾರ ಮನೆಗಳನ್ನು ಪುನರ್ ನಿರ್ಮಿಸಲು ಸಬ್ಸಿಡಿಗಳೊಂದಿಗೆ ಪ್ರತಿ ಮನೆಗೆ ೮ ಲಕ್ಷ ರೂಪಾಯಿಗಳಿಂದ ೧೧ ಲಕ್ಷ ರೂಪಾಯಿಗಳವರೆಗೆ ಆರ್ಥಿಕ ಸಹಾಯ ಘೋಷಿಸಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

<><><>

ಮಾಜಿ ಸಚಿವ ಆರ್.ವಿ.ದೇಶಪಾಂಡೆ ಅಧ್ಯಕ್ಷತೆಯ "ಕರ್ನಾಟಕ ಆಡಳಿತಾ ಸುಧಾರಣಾ ಆಯೋಗ"ದ ೧೦ನೇ ವರದಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕಾವೇರಿ ನಿವಾಸದಲ್ಲಿ ಇಂದು ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಸಚಿವರಾದ ಎಂ.ಬಿ. ಪಾಟೀಲ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಉಪಸ್ಥಿತರಿದ್ದರು. ಆಯೋಗವು ಕೃಷಿ, ತೋಟಗಾರಿಕೆ, ರೇಷ್ಮೆಕೃಷಿ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪ ಸಂಖ್ಯಾತರ ಕಲ್ಯಾಣ, ಪಶು ಸಂಗೋಪನೆ ಮತ್ತು ಪಶು ವೈದ್ಯಕೀಯ ಸೇವೆಗಳು, ಮೀನುಗಾರಿಕೆ, ಗ್ರಾಮೀಣಾಭಿವೃದ್ಧಿ ಸೇರಿದಂತೆ ಹಲವು ಇಲಾಖೆಗಳೊಂದಿಗೆ ಸಮಾಲೋಚನೆ ನಡೆಸಿದೆ. ೧೦ನೇ ವರದಿಯಲ್ಲಿ ಆಯೋಗವು ಒಟ್ಟು ೩೫೪ ಹೊಸ ಶಿಫಾರಸ್ಸುಗಳನ್ನು ಸರ್ಕಾರಕ್ಕೆ ನೀಡಿದೆ.

<><><>

ಕೇರಳದ ಅಕ್ರಮ ವಲಸಿಗರಿಗೆ ಆದ್ಯತೆ ನೀಡುತ್ತಿರುವುದು, ಡ್ರಗ್ಸ್ ಮಾಫಿಯಾ, ಗೃಹಲಕ್ಷ್ಮೀ ಹಣವನ್ನು ಫಲಾನುಭವಿಗಳಿಗೆ ಸಕಾಲಕ್ಕೆ ನೀಡದೇ ಇರುವುದು ಸೇರಿದಂತೆ ಹಲವು ವಿಷಯಗಳ ಬಗ್ಗೆ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ರಾಜ್ಯಾದ್ಯಂತ ಹೋರಾಟ ನಡೆಸಲು ತೀರ್ಮಾನಿಸಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವುದೇ ನಿಯಮಗಳನ್ನು ಪಾಲಿಸದೆ ಅಕ್ರಮ ವಲಸಿಗರಿಗೆ ಮನೆಗಳನ್ನು ನೀಡುವುದು ಕಾನೂನಿಗೆ ವಿರುದ್ಧವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ರಾಜ್ಯದಲ್ಲಿ ಮಾದಕ

ದ್ರವ್ಯಗಳ ಹಾವಳಿ ಮಿತಿ ಮೀರಿದ್ದು, ರಾಜ್ಯ ಸರ್ಕಾರ ಮಾದಕ ದ್ರವ್ಯ ಮಾಫಿಯಾ ತಡೆಗಟ್ಟುವಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ಆರೋಪಿಸಿದ್ದಾರೆ.

ಧ್ವನಿ : ಬಿ.ವೈ. ವಿಜಯೇಂದ್ರ

<><><>

ಬೆಂಗಳೂರು ಶಿಕ್ಷಕರ ಕ್ಷೇತ್ರ ಚುನಾವಣೆಗೆ ಸಂಬಂಧಿಸಿದಂತೆ ಅಂತಿಮ ಮತದಾರರ ಪಟ್ಟಿಯಲ್ಲಿ ಒಟ್ಟು ೧೮ ಸಾವಿರದ ೪೯೬ ಮತದಾರರಿರುವುದಾಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತರು ಹಾಗೂ ಜಿಲ್ಲಾ ಚುನಾವಣಾಧಿಕಾರಿ ಮಹೇಶ್ವರ್ ರಾವ್ ತಿಳಿಸಿದ್ದಾರೆ. ಜಿಬಿಎ ಕೇಂದ್ರ ಕಚೇರಿಯಲ್ಲಿಂದು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗಿನ ಸಭೆಯಲ್ಲಿ ಮಾತನಾಡಿದ ಅವರು, ಕೇಂದ್ರ ಚುನಾವಣಾ ಆಯೋಗದ ವೇಳಾಪಟ್ಟಿಯನ್ವಯ, ನವೆಂಬರ್ ೨೫ರಿಂದ ಡಿಸೆಂಬರ್ ೧೦ರವರೆಗೆ ಹಕ್ಕುಗಳು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಸ್ವೀಕರಿಸಲಾದ ಅರ್ಜಿಗಳ ಪರಿಶೀಲನೆಯ ನಂತರ, ಜಿಬಿಎ ವ್ಯಾಪ್ತಿಯ ೨೮ ವಿಧಾನಸಭಾ ಕ್ಷೇತ್ರಗಳ ಅಂತಿಮ ಮತದಾರರ ಪಟ್ಟಿಯನ್ನು ಇಂದು ಪ್ರಕಟಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಚುನಾವಣೆ ವಿಭಾಗದ ವಿಶೇಷ ಆಯುಕ್ತ ಆರ್. ರಾಮಚಂದ್ರನ್ ಮಾತನಾಡಿ, ಅಂತಿಮ ಪರಿಷ್ಕರಣೆಯಲ್ಲಿ ತಪ್ಪಿಹೋದ ಅರ್ಹ ಶಿಕ್ಷಕರು ಅಭ್ಯರ್ಥಿಗಳ ನಾಮನಿರ್ದೇಶನದ ಕೊನೆಯ ದಿನಾಂಕದವರೆಗೆ ಸೇರ್ಪಡೆಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಹೇಳಿದ್ದಾರೆ.

<><><>

ಇಂದು ವೈಕುಂಠ ಏಕಾದಶಿ. ಈ ಹಿನ್ನೆಲೆಯಲ್ಲಿ ರಾಜ್ಯದ ವೆಂಕಟರಮಣಸ್ವಾಮಿ, ರಂಗನಾಥಸ್ವಾಮಿ, ವೇಣುಗೋಪಾಲಸ್ವಾಮಿ ದೇವಾಲಯಗಳಲ್ಲಿ ವಿಶೇಷ ಪೂಜೆ ನಡೆಯುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹಲವು ದೇವಾಲಯಗಳಲ್ಲಿ ವಿಶೇಷ ಪೂಜೆ ಹಮ್ಮಿಕೊಳ್ಳಲಾಗಿದೆ. ಭಕ್ತರು ಉತ್ತರಾಭಿಮುಖದ ವೈಕುಂಠ ದ್ವಾರದ ಮೂಲಕ ಹಾದು ಸ್ವಾಮಿಯ ದರ್ಶನ ಪಡೆಯುತ್ತಿದ್ದಾರೆ. ದೊಡ್ಡಬಳ್ಳಾಪುರದ ಪ್ರಸನ್ನ ವೆಂಕಟರಮಣ ಸ್ವಾಮಿ ದೇವಾಲಯ, ವಡ್ಡರಹಳ್ಳಿಯ ತಿರುಮಲ ಕಲ್ಯಾಣ ಶ್ರೀನಿವಾಸ ದೇವಾಲಯಗಳಲ್ಲಿ  ವಿಶೇಷ ಅಲಂಕಾರ ಮಾಡಲಾಗಿದೆ. ಧನುರ್ಮಾಸದ ಶುದ್ಧ ಪಕ್ಷದ ವೈಕುಂಠ ಏಕಾದಶಿಯ ಪ್ರಯುಕ್ತ ಮಂಡ್ಯದ ಹಲವು ದೇವಾಲಯಗಳಲ್ಲಿ ವಿಶೇಷ ಪೂಜೆ ಹಾಗೂ ವೈಕುಂಠ ದ್ವಾರ ದರ್ಶನ ನಡೆಯುತ್ತಿದೆ. ಚಿಕ್ಕ ತಿರುಪತಿ ಎಂದೇ ಹೆಸರಾಗಿರುವ ಮಂಡ್ಯ ಜಿಲ್ಲೆಯ ಕರಿಘಟ್ಟದ ವೆಂಕಟೇಶ್ವರ ದೇಗುಲ, ಮದ್ದೂರಿನ ಹೊಯ್ಸಳರ ಕಾಲದ ಐತಿಹಾಸಿಕ ದೇವಾಲಯವಾದ ಯೋಗ ನರಸಿಂಹಸ್ವಾಮಿ, ಹೊಳೆ ಆಂಜನೇಯಸ್ವಾಮಿ ಸೇರಿದಂತೆ ಜಿಲ್ಲೆಯ ಹಲವು ದೇಗುಲಗಳಲ್ಲಿ ವಿಶೇಷ ಪೂಜೆ ಮತ್ತು ವೈಕುಂಠ ದ್ವಾರ ದರ್ಶನ ಏರ್ಪಡಿಸಲಾಗಿದೆ. ಚಿಕ್ಕಮಗಳೂರು ಜಿಲ್ಲೆಯ ಹಲವು ದೇವಾಲಯಗಳಲ್ಲಿ ವೈಕುಂಠ ಏಕಾದಶಿಯನ್ನು

ಆಚರಿಸಲಾಗುತ್ತಿದೆ. ಹಿರೇಮಗಳೂರಿನ ಕೊದಂಡರಾಮಚಂದ್ರ ಸ್ವಾಮಿ ದೇವಾಲಯದಲ್ಲಿ ಮುಂಜಾನೆಯಿಂದಲೇ ವಿಶೇಷ ಅಲಂಕಾರ, ಪೂಜೆ, ಭಜನಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಕೋಲಾರ ಜಿಲ್ಲೆಯ ಬಂಗಾರು ತಿರುಪತಿ ಲಕ್ಷ್ಮಿ ವೆಂಕಟೇಶ್ವರ ದೇವಸ್ಥಾನದಲ್ಲಿ ವೈಕಂಠ ಏಕಾದಶಿ ಪ್ರಯುಕ್ತ ವಿಶೇಷ ಹೂವಿನ ಅಲಂಕಾರ ಮಾಡಲಾಗಿದೆ. ವೈಕುಂಠ ಏಕಾದಶಿ ಅಂಗವಾಗಿ ಹಾಸನ ಜಿಲ್ಲೆಯಾದ್ಯಂತ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ನಡೆಯುತ್ತಿವೆ.

<><><><>

ಕುಮಟಾ-ಶಿರಸಿ, ರಾಷ್ಟ್ರೀಯ ಹೆದ್ದಾರಿ-೭೬೬ಇ ರಸ್ತೆಯಲ್ಲಿ ಇಂದಿನಿಂದ ಬಸ್ ಸಂಚಾರಕ್ಕೆ ಅನುವು ಮಾಡಿ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಆದೇಶ ಹೊರಡಿಸಿದ್ದಾರೆ. ಶಿರಸಿಯ ಮಾರಿಕಾಂಬಾ ಜಾತ್ರೆ ಹಿನ್ನೆಲೆಯಲ್ಲಿ, ಪೊಲೀಸ್ ಅಧೀಕ್ಷಕರು ಉತ್ತರ ಕನ್ನಡ ಜಿಲ್ಲೆ ಹಾಗೂ ಯೋಜನಾ ನಿರ್ದೇಶಕರು, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಕಾರವಾರ ಇವರ ವರದಿ ಆಧಾರದ ಮೇಲೆ ಸದರಿ ರಸ್ತೆಯಲ್ಲಿ ಸಂಚಾರವನ್ನು ಆರಂಭಿಸಲಾಗಿದೆ ಎಂದು ತಿಳಿಸಿದ್ದಾರೆ. ಬಸ್ ಹೊರತುಪಡಿಸಿ ಬೇರೆ ವಾಹನಗಳು ಸಂಚರಿಸದಂತೆ ಸೂಚನೆ ನೀಡಿದ್ದಾರೆ. ಕಾಮಗಾರಿ ಪ್ರಗತಿಯಲ್ಲಿರುವ ಪ್ರದೇಶದಲ್ಲಿ ವೇಗದ ಮಿತಿ ೨೦ ಕಿಲೋಮೀಟರ್‌ಗೆ ಸೀಮಿತವಾಗಿರಬೇಕು ಎಂದು ನಿರ್ದೇಶನ ನೀಡಿದ್ದಾರೆ. ಪೊಲೀಸ್ ಇಲಾಖೆ ವತಿಯಿಂದ ಅವಶ್ಯವಿರುವ ಕಡೆಗಳಲ್ಲಿ ಬ್ಯಾರಿಕೇಡ್ ಕಡ್ಡಾಯವಾಗಿ ಅಳವಡಿಸಬೇಕು ಸಂಚಾರ ದಟ್ಟಣೆ ಆಗದ ರೀತಿಯಲ್ಲಿ ಸೂಕ್ತ ಕ್ರಮ ಕೈಗೊಳ್ಳಬೇಕು ತಮ್ಮ ಆದೇಶದಲ್ಲಿ ಸೂಚಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>